**ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ**
ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

**कर्नाटक–संस्कृत–विश्वविद्यालय:**
श्री चामराजेन्द्र संस्कृत महाविद्यालयस्य परिसर:
पम्पमहाकविमार्ग:, चामराजपेटे, बेङ्गलूरु – ५६००१८.

## ೦೯.೧೧.೨೦೧೨ರಂದು ನಡೆದ ಪ್ರಶಿಕ್ಷಣ ಪರಿಷತ್ತಿನ ೬ನೇ ಸಭೆಯ ನಡಾವಳಿ

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಪ್ರಶಿಕ್ಷಣ ಪರಿಷತ್ತಿನ ೬ನೇ ಸಭೆಯು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನವೆಂಬರ್ ೦೯, ೨೦೧೨ರ ಶುಕ್ರವಾರದಂದು ಬೆಳಿಗ್ಗೆ ೦೮.೩೦ ಗಂಟೆಗೆ ನಡೆಯಿತು. ಈ ಸಭೆಯಲ್ಲಿ ಕೆಳಕಂಡ ಮಾನ್ಯ ಸದಸ್ಯರು ಹಾಜರಿದ್ದರು.

**ಹಾಜರಿದ್ದವರು:**

| | | |
|---|---|---|
| ೧. | **ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ,** ಮಾನ್ಯ ಕುಲಪತಿಗಳು | ಅಧ್ಯಕ್ಷರು |
| ೨. | **ವಿದ್ವಾನ್ ಗಜಾನನ ಲಕ್ಷ್ಮೀನಾರಾಯಣ ಭಟ್ಟ,** ಉಮ್ಮಚಗಿ | ಸದಸ್ಯರು |
| ೩. | **ಡಾ. ಬಿ.ಎಸ್. ಮಹದೇವಯ್ಯ,** ಶಿವಮೊಗ್ಗ | ಸದಸ್ಯರು |
| ೪. | **ವಿದ್ವಾನ್ ಚಂದ್ರಶೇಖರಯ್ಯ,** ರಾಮನಗರ | ಸದಸ್ಯರು |
| ೫. | **ಡಾ. ಪದ್ಮಾಶೇಖರ್,** ಮೈಸೂರು | ಸದಸ್ಯರು |
| ೬. | **ಡಾ. ಸಿ. ಪಾಲಯ್ಯ,** ಚಿತ್ರದುರ್ಗ | ಸದಸ್ಯರು |
| ೭. | **ಡಾ. ಭಗವಂತ ಲಕ್ಷ್ಮಣ ನಡೋಣಿ,** ಧಾರವಾಡ | ಸದಸ್ಯರು |
| ೮. | **ವಿದ್ವಾನ್ ಶ್ರೀನಿವಾಸಮೂರ್ತಿ,** ಮೈಸೂರು | ಸದಸ್ಯರು |
| ೯. | **ಪ್ರೊ. ಸಿ. ನಂಜುಂಡಯ್ಯ,** ಆದಿಚುಂಚನಗಿರಿ | ಸದಸ್ಯರು |
| ೧೦. | **ವಿದ್ವಾನ್ ಎ. ಹರಿದಾಸ ಭಟ್ಟ,** ಬೆಂಗಳೂರು | ಸದಸ್ಯರು |
| ೧೧. | **ವಿದ್ವಾನ್ ಡಿ.ಎಸ್. ಚಂದ್ರಶೇಖರಯ್ಯ,** ತುಮಕೂರು | ಸದಸ್ಯರು |
| ೧೨. | **ಡಾ. ಎಚ್.ಕೆ. ಸುರೇಶ್ ಆಚಾರ್ಯ,** ಉಡುಪಿ | ಸದಸ್ಯರು |
| ೧೩. | **ವಿದ್ವಾನ್ ವಿಶ್ವೇಶ್ವರ ಗೋಪಾಲ ಹೆಗಡೆ,** ಹೊನ್ನಾವರ | ಸದಸ್ಯರು |
| ೧೪. | **ಡಾ. ಶ್ರೀನಿವಾಸ ವರಖೇಡಿ,** ಡೀನ್, ಭಾಷಾ ನಿಕಾಯ | ಸದಸ್ಯರು |
| ೧೫. | **ಪ್ರೊ. ವೈ.ಎಸ್. ಸಿದ್ದೇಗೌಡ,** ಕುಲಸಚಿವರು | ಸದಸ್ಯ ಕಾರ್ಯದರ್ಶಿ |

**ಗೈರುಹಾಜರಿ:**

| | | |
|---|---|---|
| ೧. | **ಪ್ರಧಾನ ಕಾರ್ಯದರ್ಶಿಗಳು,** ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| ೨. | **ಅಪರ ಮುಖ್ಯ ಕಾರ್ಯದರ್ಶಿಗಳು,** ಹಣಕಾಸು ಇಲಾಖೆ, ಬೆಂಗಳೂರು | ಸದಸ್ಯರು |
| ೩. | **ಕಾರ್ಯದರ್ಶಿಗಳು,** ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ), ಬೆಂಗಳೂರು | ಸದಸ್ಯರು |
| ೪. | **ನಿರ್ದೇಶಕರು,** ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಮೈಸೂರು | ಸದಸ್ಯರು |
| ೫. | **ಆಯುಕ್ತರು,** ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | ಸದಸ್ಯರು |
| ೬. | **ಪ್ರೊ. ಬಿ. ಮಹಾದೇವನ್,** ಬೆಂಗಳೂರು | ಸದಸ್ಯರು |

ಸಭೆಯ ಆರಂಭಕ್ಕೆ ಮುನ್ನ ಮಾನ್ಯ ಕುಲಪತಿಗಳು ಎಲ್ಲ ಗೌರವಾನ್ವಿತ ಸದಸ್ಯರನ್ನು ಸ್ವಾಗತಿಸಿದರು. ಅನಂತರ ಸಭೆಯಲ್ಲಿ ಕೆಳಕಂಡ ಕಾರ್ಯಸೂಚಿಗಳು ಮಂಡಿತವಾಗಿ ನಿರ್ಣಯಗೊಂಡವು.

**ವಿಷಯ 1: ಪ್ರಶಿಕ್ಷಣ ಪರಿಷತ್ ಐದನೇ ಸಭೆಯ ಅನುಪಾಲನಾ ವರದಿ.**

ಟಿಪ್ಪಣಿ: ದಿನಾಂಕ: 17.10.2012ರಂದು ನಡೆದ ವಿಶ್ವವಿದ್ಯಾಲಯದ ಪ್ರಶಿಕ್ಷಣ ಪರಿಷತ್ತಿನ ಐದನೇ ಸಭೆಯಲ್ಲಿ ಚರ್ಚಿತವಾದ **ವಿಷಯ ಸಂಖ್ಯೆ 3ಕ್ಕೆ** ಸಂಬಂಧಿಸಿದಂತೆ ಪರಿನಿಯಮವನ್ನು ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸಲಾಗಿದೆ. ವಿಷಯ ಸಂಖ್ಯೆ 6ಕ್ಕೆ ಸಂಬಂಧಿಸಿದಂತೆ ಸಂಯುಕ್ತಗೊಂಡ ಸಂಸ್ಕೃತ ಪಾಠಶಾಲೆಗಳ ಪ್ರತ್ಯೇಕ ಕಾರ್ಯನಿರ್ವಹಣೆಯ ಬಗೆಗೆ ಕ್ರಮವಹಿಸಲಾಗಿದೆ. ವಿಷಯ ಸಂಖ್ಯೆ 10ಕ್ಕೆ ಸಂಬಂಧಿಸಿದಂತೆ ಯೋಜನೆಯನ್ನು ಪ್ರಾರಂಭಿಸಲು ಕ್ರಮವಹಿಸಲಾಗಿದೆ. ವಿಷಯ ಸಂಖ್ಯೆ 12ಕ್ಕೆ ಸಂಬಂಧಿಸಿದಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ. ವಿಷಯ ಸಂಖ್ಯೆ 13ರಲ್ಲಿ ಸಮಿತಿಗಳು ಕಾರ್ಯೋನ್ಮುಖವಾಗಿವೆ. ವಿಷಯ ಸಂಖ್ಯೆ 18 ಹಾಗೂ 20ಕ್ಕೆ ಸಂಬಂಧಿಸಿದಂತೆ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಕಳುಹಿಸಲು ಕ್ರಮವಹಿಸಲಾಗುತ್ತಿದೆ.

ನಿರ್ಣಯ: **ಸಭೆಯು ಅನುಪಾಲನಾ ವಿವರಗಳನ್ನು ಪರಿಶೀಲಿಸಿ ಅನುಮೋದಿಸಿತು.**

**ವಿಷಯ 2: ದೀಕ್ಷಾಂತ ಘಟಿಕೋತ್ಸವ ಸಮಾರಂಭದಲ್ಲಿ ಗೌರವ ಡಿ.ಲಿಟ್ ಪ್ರದಾನ ಮಾಡುವುದರ ಬಗೆಗೆ.**

ಟಿಪ್ಪಣಿ: ಮಾನ್ಯ ಕುಲಾಧಿಪತಿಗಳ ಅನುಮೋದನೆಯಂತೆ ಈ ಕೆಳಕಂಡ ಐವರು ವಿದ್ವಾಂಸರಿಗೆ ವಿಶ್ವವಿದ್ಯಾಲಯದ ಡಿ.ಲಿಟ್ ಗೌರವ ಉಪಾಧಿಯನ್ನು ನೀಡಲಾಗುತ್ತಿದೆ.

1. ಪಂಡಿತ ಸುಧಾಕರ ಚತುರ್ವೇದಿ
2. ವಿದ್ವಾನ್ ಎನ್. ರಂಗನಾಥಶರ್ಮಾ
3. ಪ್ರೊ. ಕೆ.ಟಿ. ಪಾಂಡುರಂಗಿ
4. ಪ್ರೊ. ಸಿ.ಜಿ. ಪುರುಷೋತ್ತಮ
5. ಡಾ. ಪರಡ್ಡಿ ಮಲ್ಲಿಕಾರ್ಜುನ

ನಿರ್ಣಯ: **ಸಭೆಯು ತುಂಬುಸಂತೋಷದಿಂದ ಗೌರವ ಡಿ.ಲಿಟ್ ಪದವಿ ಪ್ರದಾನ ಮಾಡಲು ತನ್ನ ಒಪ್ಪಿಗೆಯನ್ನು ನೀಡಿ ಅನುಮೋದಿಸಿತು.**

**ವಿಷಯ 3: 2010–11ನೇ ಸಾಲಿನಲ್ಲಿ ನಡೆದ ಸ್ನಾತಕ–ಸ್ನಾತಕೋತ್ತರ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಬಿ.ಎ. ವಿದ್ವನ್ಮಧ್ಯಮಾ ಹಾಗೂ ಎಂ.ಎ. ವಿದ್ವದುತ್ತಮಾ ಉಪಾಧಿಗಳನ್ನು ಪ್ರದಾನ ಮಾಡುವ ಬಗೆಗೆ.**

ಟಿಪ್ಪಣಿ: ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು 2010–11ನೇ ಸಾಲಿನಲ್ಲಿ ನಡೆಸಿದ ಸಂಸ್ಕೃತ/ವೇದ ಸ್ನಾತಕ–ಸ್ನಾತಕೋತ್ತರ ಪ್ರಸಿದ್ಧ ಪರೀಕ್ಷೆಗಳಲ್ಲಿ ಉತ್ತೀರ್ಣರಾದ **174 ವಿದ್ಯಾರ್ಥಿಗಳಿಗೆ ಬಿ.ಎ. ವಿದ್ವನ್ಮಧ್ಯಮಾ** ಹಾಗೂ **136 ವಿದ್ಯಾರ್ಥಿಗಳಿಗೆ ಎಂ.ಎ. ವಿದ್ವದುತ್ತಮಾ** ಉಪಾಧಿಯನ್ನು ಪ್ರಥಮ ದೀಕ್ಷಾಂತ ಘಟಿಕೋತ್ಸವ ಸಮಾರಂಭದಲ್ಲಿ ಪ್ರದಾನ ಮಾಡಲಾಗುತ್ತಿದೆ.

ನಿರ್ಣಯ: **ಸಭೆಯು ಎಲ್ಲ ವಿವರಗಳನ್ನು ಪರಿಶೀಲಿಸಿ ತುಂಬುಸಂತೋಷದಿಂದ 174 ಬಿ.ಎ. ವಿದ್ವನ್ಮಧ್ಯಮಾ ಮತ್ತು 136 ಎಂ.ಎ. ವಿದ್ವದುತ್ತಮಾ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲು ತನ್ನ ಒಪ್ಪಿಗೆಯನ್ನು ನೀಡಿ ಅನುಮೋದಿಸಿತು.**

**ವಿಷಯ 4: ಆಯಾ ಶಾಸ್ತ್ರಭಾಗಗಳಲ್ಲಿ ಅತಿಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸರ್ವೋತ್ಕೃಷ್ಟಶ್ರೇಣಿ ಪ್ರಮಾಣಪತ್ರ ನೀಡುವ ಬಗೆಗೆ.**

ಟಿಪ್ಪಣಿ: 2010–11ನೇ ಸಾಲಿನಲ್ಲಿ ವಿವಿಧ ಶಾಸ್ತ್ರಗಳಲ್ಲಿ ವಿಶಿಷ್ಟ ಶ್ರೇಣಿ ಪಡೆದು ಉತ್ತೀರ್ಣರಾದ ಹನ್ನೆರಡು (12) ಮಂದಿ ವಿದ್ಯಾರ್ಥಿಗಳಿಗೆ ರೂ. 5000/– ನಗದು ಪುರಸ್ಕಾರ ಮತ್ತು ಸರ್ವೋತ್ಕೃಷ್ಟಶ್ರೇಣಿ ಪ್ರಮಾಣಪತ್ರವನ್ನು ನೀಡಲಾಗುತ್ತಿದೆ. ಹನ್ನೆರಡು ಮಂದಿ ವಿದ್ಯಾರ್ಥಿಗಳು ಮತ್ತು ಶಾಸ್ತ್ರಭಾಗಗಳ ವಿವರ ಕೆಳಗಿನಂತಿದೆ:

| | | | |
|---|---|---|---|
| 1. | ಭೀಮಸೇನ | ಅಲಂಕಾರ | ಪೂರ್ಣಪ್ರಜ್ಞ ವಿದ್ಯಾಪೀಠ ಸಂಸ್ಕೃತ ಕಾಲೇಜು, ಬೆಂಗಳೂರು |
| 2. | ನಾಗೇಂದ್ರ | ವ್ಯಾಕರಣ | ಶ್ರೀಮನ್ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು |
| 3. | ಅರ್ಜುನ ಎಸ್.ಆರ್. | ನವೀನನ್ಯಾಯ | ಪೂರ್ಣಪ್ರಜ್ಞ ವಿದ್ಯಾಪೀಠ ಸಂಸ್ಕೃತ ಕಾಲೇಜು, ಬೆಂಗಳೂರು |
| 4. | ನಾಗರಾಜ ಭಟ್ | ಧರ್ಮಶಾಸ್ತ್ರ | ಶ್ರೀಮನ್ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು |
| 5. | ಸುಧೀಂದ್ರ | ಜ್ಯೋತಿಷ್ಯ | ಎಸ್.ಎಂ.ಎಸ್.ಪಿ. ಸಂಸ್ಕೃತ ಕಾಲೇಜು, ಉಡುಪಿ |
| 6. | ಸಂತೋಷ್‌ಕುಮಾರ್ ಜೋಷಿ | ಪೂರ್ವಮೀಮಾಂಸಾ | ಶ್ರೀಮನ್ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು |
| 7. | ಹಯವದನ ಬಿ.ಎಸ್. | ದ್ವೈತವೇದಾಂತ | ಪೂರ್ಣಪ್ರಜ್ಞ ವಿದ್ಯಾಪೀಠ ಸಂಸ್ಕೃತ ಕಾಲೇಜು, ಬೆಂಗಳೂರು |
| 8. | ಅರುಣ್‌ಕುಮಾರ್ ಎ.ಎಲ್. | ಅದ್ವೈತವೇದಾಂತ | ಶ್ರೀ ಕಾಲಭೈರವೇಶ್ವರ ಸಂಸ್ಕೃತ ವೇದ ಆಗಮ ಕಾಲೇಜು, ಆದಿಚುಂಚನಗಿರಿ |
| 9. | ಶ್ರೀಕಂಠ | ಜೈನಸಿದ್ಧಾಂತ | ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜು, ಬೆಂಗಳೂರು |
| 10. | ರಮೇಶ ಭಟ್ಟ ಕೆ. | ಋಗ್ವೇದ ಘನಾಂತ | ಶ್ರೀ ಮೇಧಾದಕ್ಷಿಣಾಮೂರ್ತಿ ವೇದಭವನ ಸಂಸ್ಕೃತ ಕಾಲೇಜು, ಗೋಕರ್ಣ |
| 11. | ರಾಜಶೇಖರ ವಿ.ಎಂ. | ಕೃಷ್ಣಯಜುರ್ವೇದ ಘನಾಂತ | ಶ್ರೀ ಕಾಲಭೈರವೇಶ್ವರ ಸಂಸ್ಕೃತ ವೇದ ಆಗಮ ಕಾಲೇಜು, ಆದಿಚುಂಚನಗಿರಿ |
| 12. | ಕೃಷ್ಣಮಾಚಾರ್ಯ ವಿ.ಎಸ್. | ಸಾಮವೇದ ಸ್ಮಾರ್ತಪ್ರಯೋಗ | ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜು, ಬೆಂಗಳೂರು |

ನಿರ್ಣಯ: **ಸಭೆಯು ಎಲ್ಲ ವಿವರಗಳನ್ನು ಪರಿಶೀಲಿಸಿ ಸರ್ವೋತ್ಕೃಷ್ಟ ಪ್ರಮಾಣಪತ್ರ ಹಾಗೂ ರೂ. 5000/–ಗಳ ನಗದು ಪುರಸ್ಕಾರ ನೀಡಲು ತುಂಬುಸಂತೋಷದಿಂದ ತನ್ನ ಒಪ್ಪಿಗೆಯನ್ನು ನೀಡಿ ಅನುಮೋದಿಸಿತು.**

**ಪ್ರೊ. ವೈ.ಎಸ್. ಸಿದ್ದೇಗೌಡ**
ಸದಸ್ಯ ಕಾರ್ಯದರ್ಶಿ

**ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ**
ಅಧ್ಯಕ್ಷರು